RNU AIR DHARWAD

**MARCH 20. 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು:**

- **2024ರ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮೊದಲ ಹಂತಕ್ಕೆ ಇಂದು ಅಧಿಸೂಚನೆ ಪ್ರಕಟ; ಎಪ್ರಿಲ್ 19ಕ್ಕೆ ಮತದಾನ.**

- **ಕಾಂಗ್ರೆಸ್ ಪ್ರಣಾಳಿಕೆಯಲ್ಲಿ; ರೈತರು, ಯುವಕರು, ಮಹಿಳೆಯರು ಮತ್ತು ಶ್ರಮಿಕರಿಗೆ ನ್ಯಾಯ ದೊರಕಿಸಲು ಆದ್ಯತೆ – ಕೆ.ಸಿ.ವೇಣುಗೋಪಾಲ್**

- **ಪೌರತ್ವ ತಿದ್ದುಪಡಿ ಕಾಯ್ದೆಗೆ ತಡೆ ನೀಡಲು ಸುಪ್ರೀಂ ಕೋರ್ಟ್ ನಕಾರ.**

- **ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆಗಾಗಿ ಪೊಲೀಸ್ ಹಾಗೂ ಅರೆಸೇನಾ ಪಡೆಗಳಿಂದ ಪಥಸಂಚಲನ.**

**ವಾರ್ತೆಗಳ ವಿವರ...**

<><><>

**2024ರ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮೊದಲ ಹಂತಕ್ಕೆ ಇಂದು ಅಧಿಸೂಚನೆ ಪ್ರಕಟವಾಗಲಿದ್ದು, ಬಹುತೇಕ ಎರಡು ತಿಂಗಳಿಗೂ ಹೆಚ್ಚಿನ ಅವಧಿಯಲ್ಲಿ ನಡೆಯಲಿರುವ ಪ್ರಜಾಪ್ರಭುತ್ವ ಉತ್ಸವಕ್ಕೆ ದೇಶ ಸಜ್ಜಾಗುತ್ತಿದೆ. ಚುನಾವಣೆಗಳ ಸಂದರ್ಭದಲ್ಲಿ ಎದುರಾಗಬಹುದಾದ ಯಾವುದೇ ಸವಾಲಿನ ನಿರ್ವಹಣೆಗೆ, ಸೂಕ್ತ ವ್ಯವಸ್ಥೆಗಳು ದೇಶಾದ್ಯಂತ ಕಾರ್ಯಾರಂಭ ಮಾಡಿವೆ. ಈಗಾಗಲೇ ವರದಿಯಾಗಿರುವಂತೆ, ಈ ಬಾರಿ ಲೋಕಸಭೆ ಚುನಾವಣೆ ಒಟ್ಟು 7 ಹಂತಗಳಲ್ಲಿ ನಡೆಯಲಿದ್ದು, ಜೂನ್ 4 ರಂದು ಮತ ಎಣಿಕೆ ನಿಗದಿಯಾಗಿದೆ. ಎಪ್ರಿಲ್ 19 ರಂದು ನಡೆಯುವ ಮೊದಲ ಹಂತದ ಚುನಾವಣೆಯಲ್ಲಿ 17 ರಾಜ್ಯಗಳು ಮತ್ತು ನಾಲ್ಕು ಕೇಂದ್ರಾಡಳಿತ ಪ್ರದೇಶಗಳ 102 ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯುವುದು. ನಾಮಪತ್ರಗಳ ಸಲ್ಲಿಕೆಗೆ ಈ ತಿಂಗಳ 27 ಕಡೆಯ ದಿನ. ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಪಾರದರ್ಶಕವಾಗಿ, ಯಾವುದೇ ಅಕ್ರಮಗಳಿಗೆ ಅವಕಾಶವಿಲ್ಲದಂತೆ ನಡೆಸಲಾಗುವುದು ಎಂದು ಕೇಂದ್ರ ಚುನಾವಣಾ ಆಯೋಗ ಭರವಸೆ ನೀಡಿದೆ. ಹಣಬಲ, ತೋಳ್ಬಲ, ಸುಳ್ಳು ಸುದ್ದಿ ಪ್ರಚಾರ ಮತ್ತು ಮಾದರಿ ನೀತಿ ಸಂಹಿತೆ ನಿಯಮಗಳ ಉಲ್ಲಂಘನೆ ಪ್ರಕರಣಗಳನ್ನು ಅತ್ಯಂತ ಕಟ್ಟುನಿಟ್ಟಾಗಿ ನಿರ್ವಹಿಸಲಾಗುವುದು. ದೇಶಾದ್ಯಂತ, ರಾಜ್ಯ ಮತ್ತು ಜಿಲ್ಲಾ ಗಡಿ ಪ್ರದೇಶಗಳಲ್ಲಿ 24 ತಾಸು ಕಾರ್ಯ ನಿರ್ವಹಿಸುವ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದ್ದು, ಮುಂಬರುವ ದಿನಗಳಲ್ಲಿ ಅಕ್ರಮಗಳ ಮೇಲೆ ನಿಗಾ ಇಡಲು ಡ್ರೋನ್ ವಿಮಾನಗಳನ್ನು ಬಳಸಲಾಗುವುದು ಎಂದು ಆಯೋಗ ತಿಳಿಸಿದೆ.**

<><><>

ರಾಹುಲ್ ಗಾಂಧಿ ಅವರು ಕೈಗೊಂಡಿದ್ದ ಭಾರತ್ ಜೋಡೋ ನ್ಯಾಯ ಯಾತ್ರೆಯ ಸಂದರ್ಭದಲ್ಲಿ ನಿರ್ಧರಿಸಿದಂತೆ ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ರೈತರು, ಯುವಕರು, ಮಹಿಳೆಯರು ಮತ್ತು ಶ್ರಮಿಕರಿಗೆ ನ್ಯಾಯ ದೊರಕಿಸಲು ಆದ್ಯತೆ ನೀಡಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮೀಸಲಾತಿ ಪ್ರಮಾಣ ಹೆಚ್ಚಿಸಲು ನಿರ್ಧರಿಸಲಾಗಿದ್ದು, ಅವರಿಗೆ ಪ್ರತ್ಯೇಕ ಬಜೆಟ್ ರೂಪಿಸಲಾಗುವುದು. ಕನಿಷ್ಟ ಬೆಂಬಲ ಬೆಲೆ ವ್ಯವಸ್ಥೆಗೆ ಕಾನೂನು ಸ್ವರೂಪ ನೀಡಲಾಗುವುದು, ಸಾಲ ಮನ್ನಾ ಆಯೋಗ ಸ್ಥಾಪಿಸಲಾಗುವುದು ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ತಿಳಿಸಿದ್ದಾರೆ. ಲೋಕಸಭಾ ಚುನಾವಣೆ ಹಿನ್ನೆಲೆ; ದೆಹಲಿಯಲ್ಲಿ ನಿನ್ನೆ ನಡೆದ ಕಾಂಗ್ರೆಸ್ ಕಾರ್ಯಕಾರಿಣಿ ಸಭೆಯಲ್ಲಿ ಪಕ್ಷದ ಪ್ರಣಾಳಿಕೆಯನ್ನು ಅಂತಿಮಗೊಳಿಸಿದ ಬಳಿಕ ಅವರು ಮಾತನಾಡಿದರು. ದೇಶದಲ್ಲಿ 30 ಲಕ್ಷ ಸರ್ಕಾರಿ ಉದ್ಯೋಗಗಳನ್ನು ಸೃಜಿಸುವ ಮೂಲಕ ಉದ್ಯೋಗಾವಕಾಶ ಹೆಚ್ಚಿಸಲಾಗುವುದು. ನಾರಿ ನ್ಯಾಯಕ್ಕಾಗಿ ಮಹಾಲಕ್ಷ್ಮೀ ಯೋಜನೆ ಜಾರಿಗೊಳಿಸಲಾಗುವುದು. ಮಹಿಳೆಯರಿಗೆ ಕೇಂದ್ರ ಸರ್ಕಾರಿ ಹುದ್ದೆಗಳಲ್ಲಿ ಶೇಕಡ 50ರಷ್ಟು ಮೀಸಲಾತಿ ನೀಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

<><><>

ಮಾಜಿ ಸಚಿವ ಜೈರಾಮ್ ರಮೇಶ್ ಮಾತನಾಡಿ; ದೇಶದಲ್ಲಿ 30 ಲಕ್ಷ ಮಂಜೂರಾದ ಸರ್ಕಾರಿ ಹುದ್ದೆಗಳಿವೆ. ಇವುಗಳ ಭರ್ತಿಗೆ ಆದ್ಯತೆ ನೀಡಲಾಗುವುದು. ಕರ್ನಾಟಕ ಮತ್ತು ತೆಲಂಗಾಣದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ 3 ತಿಂಗಳಲ್ಲಿ ಭರವಸೆಗಳನ್ನು ಜಾರಿಗೊಳಿಸಲಾಗಿದೆ ಎಂದು ಹೇಳಿದರು.

<><><>

ಚುನಾವಣೆ ಘೋಷಣೆ ಬಳಿಕವೂ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಮತದಾರರಿಗೆ ಉಚಿತ ಆಮಿಷಗಳನ್ನು ನೀಡಲಾಗುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಜೆಡಿಎಸ್ ವರಿಷ್ಠ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ. ಸುಮಾರು 48 ಲಕ್ಷ ಕುಕ್ಕರ್‌ಗಳನ್ನು ಕಳೆದ 48 ಗಂಟೆಗಳಲ್ಲಿ ವಿತರಿಸಿದ್ದಾರೆ. ಈ ಕುರಿತು ರಾಮನಗರ ಜಿಲ್ಲಾಧಿಕಾರಿಗಳಿಗೆ ದೂರು ನೀಡಲಾಗಿದ್ದು, ಬಿಜೆಪಿ ಹಾಗೂ ಜೆಡಿಎಸ್‌ನ ಕಾರ್ಯಕರ್ತರು ಚುನಾವಣಾ ಬಾಹಿರ ಚಟುವಟಿಕೆಗಳನ್ನು ಪತ್ತೆ ಹಚ್ಚಿ ಸಂಬಂಧಿಸಿದ ಅಧಿಕಾರಿಗಳಿಗೆ ದೂರು ನೀಡಬೇಕು ಎಂದು ತಿಳಿಸಿದರು. ಜೆಡಿಎಸ್–ಬಿಜೆಪಿ ಮೈತ್ರಿಯಲ್ಲಿ ಯಾವುದೇ ಗೊಂದಲವಿಲ್ಲ. ಎಲ್ಲವೂ ಸುಗಮವಾಗಿ ಸಾಗುತ್ತಿದೆ. ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಜನರ ಆಕಾಂಕ್ಷೆಗಳಿಗೆ ಅನುಗುಣವಾಗಿ ಮುಂದುವರಿಯಲಾಗುವುದು ಎಂದು ತಿಳಿಸಿದರು.

<><><>

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ, ಕಲಬುರಗಿ ಮತ್ತು ಶಿವಮೊಗ್ಗ ನಗರಗಳಲ್ಲಿ ಆಯೋಜಿಸಲಾದ ಪ್ರಧಾನಿ ನರೇಂದ್ರ ಮೋದಿ ಅವರ ಬೃಹತ್ ರ್‍ಯಾಲಿ ಕಾರ್ಯಕ್ರಮಗಳು ಯಶಸ್ವಿಯಾಗಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ವತಃ ಪ್ರಧಾನಿ ಅವರೇ ರ್‍ಯಾಲಿಗಳ ಯಶಸ್ಸಿನ ಬಗ್ಗೆ ಸಂತೋಷ ವ್ಯಕ್ತಪಡಿಸಿದ್ದಾರೆ. ಕರ್ನಾಟಕದಲ್ಲಿ ನರೇಂದ್ರ ಮೋದಿ ಅವರ ಜನಪ್ರಿಯತೆ ಹೆಚ್ಚಾಗುತ್ತಿದ್ದು, ಇದು ಕಾರ್ಯಕರ್ತರಿಗೆ ಮತ್ತಷ್ಟು ಉತ್ಸಾಹ ತಂದಿದೆ ಎಂದರು. ಜೆಡಿಎಸ್ ಜೊತೆಗೆ ಸೀಟು ಹಂಚಿಕೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಪಕ್ಷದ ರಾಷ್ಟ್ರೀಯ ನಾಯಕರು ಜೆಡಿಎಸ್ ವರಿಷ್ಠರೊಂದಿಗೆ ಚರ್ಚೆ ನಡೆಸುತ್ತಿದ್ದು, ಎಲ್ಲವೂ ಬಗೆಹರಿದು ಸುಖಾಂತ್ಯ ಕಾಣಲಿದೆ ಎಂದು ಹೇಳಿದರು. ಕಳೆದೊಂದು ವಾರದಲ್ಲಿ ನಡೆಯುತ್ತಿರುವ ಬೆಳವಣಿಗೆಗಳನ್ನು ಗಮನಿಸಿದರೆ, ಕಾಂಗ್ರೆಸ್ ಪಕ್ಷಕ್ಕೆ ತನ್ನ ನಾಯಕರಿಗಿಂತ ಬಿಜೆಪಿ ನಾಯಕರ ಮೇಲೆ ಪ್ರೀತಿ, ವಿಶ್ವಾಸ ಹೆಚ್ಚಿದೆ. ಹಿರಿಯ ನಾಯಕರಾದ ಡಿ.ವಿ.ಸದಾನಂದಗೌಡ

ಅವರು ಬಿಜೆಪಿಯಲ್ಲೇ ಇರುತ್ತಾರೆ. ಮತ್ತೋರ್ವ ಹಿರಿಯ ನಾಯಕ ಈಶ್ವರಪ್ಪನವರು ಸಹ ಪಕ್ಷದಲ್ಲಿಯೇ ಮುಂದುವರಿಯಲಿದ್ದಾರೆ ಎಂದು ಹೇಳಿದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ಪೌರತ್ವ ತಿದ್ದುಪಡಿ ಕಾಯ್ದೆಗೆ ತಡೆ ನೀಡಲು ಸುಪ್ರೀಂ ಕೋರ್ಟ್ ನಿನ್ನೆ ನಿರಾಕರಿಸಿದೆ. ಜೊತೆಗೆ, ಕಾಯ್ದೆ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಸಲ್ಲಿಕೆಯಾಗಿರುವ ಅರ್ಜಿಗಳಿಗೆ ಏಪ್ರಿಲ್ 8ರೊಳಗೆ ಪ್ರತಿಕ್ರಿಯೆ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಸೂಚಿಸಿದೆ. ಅರ್ಜಿಗಳ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ನೇತೃತ್ವದ ನ್ಯಾಯಪೀಠ, ಮುಂದಿನ ವಿಚಾರಣೆಯನ್ನು ಏಪ್ರಿಲ್ 9ಕ್ಕೆ ಮುಂದೂಡಿತು. ಕಳೆದ ತಿಂಗಳು ಕೇಂದ್ರ ಸರ್ಕಾರ ಪೌರತ್ವ ತಿದ್ದುಪಡಿ ಕಾಯ್ದೆಯ ಜಾರಿಗೆ ಅಧಿಸೂಚನೆ ಹೊರಡಿಸಿತ್ತು.

<><><>

ಸೂಕ್ಷ್ಮ ಹಾಗೂ ಅತಿಸೂಕ್ಷ್ಮ ಕೇಂದ್ರಗಳಲ್ಲಿ ಸಾರ್ವಜನಿಕರಲ್ಲಿ ಆತಂಕವನ್ನು ದೂರವಾಗಿಸುವ ನಿಟ್ಟಿನಲ್ಲಿ ಪಥಸಂಚಲನ ಮಾಡಲಾಗುತ್ತಿದೆ ಎಂದು ಮಂಡ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್ ತಿಳಿಸಿದ್ದಾರೆ. ಲೋಕಸಭಾ ಚುನಾವಣೆ ಹಿನ್ನೆಲೆ ಮಂಡ್ಯ ಜಿಲ್ಲಾ ಪೊಲೀಸ್ ವತಿಯಿಂದ ಸಿ.ಆರ್.ಪಿ.ಎಫ್. ತಂಡ ಹಾಗೂ ಪೊಲೀಸ್ ಸಿಬ್ಬಂದಿ ಸೇರಿದಂತೆ ಸುಮಾರು 500ಕ್ಕೂ ಹೆಚ್ಚು ಮಂದಿ ಜಿಲ್ಲೆಯ ಹೊಳಲು ವೃತ್ತದಿಂದ ನಗರದ ಪ್ರಮುಖ ರಸ್ತೆಗಳಲ್ಲಿ ಮಾರ್ಗ ಪಥಸಂಚಲನ ನಡೆಸಿ ಅವರು ಮಾತನಾಡಿದರು. ಮಂಡ್ಯ, ಮಳವಳ್ಳಿ ಹಾಗೂ ಮದ್ದೂರಿನಲ್ಲಿ ಪ್ರತಿನಿತ್ಯ ಮಾರ್ಗ ಪಥಸಂಚಲನವನ್ನು ಮಾಡಲಾಗುತ್ತಿದ್ದು, ಚುನಾವಣಾ ದಿನಾಂಕ ಘೋಷಣೆಯಾದ ಹಿನ್ನೆಲೆ ಜಿಲ್ಲಾದ್ಯಂತ ಪೊಲೀಸ್ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

<><><>

ಲೋಕಸಭಾ ಚುನಾವಣೆಯನ್ನು ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ನಡೆಸುವ ಉದ್ದೇಶದಿಂದ ಜಿಲ್ಲಾ ಪೊಲೀಸರು ಹಾಗೂ ಅರೆಸೇನಾ ಪಡೆ ಮೈಸೂರಿನಲ್ಲಿ ನಿನ್ನೆ ಪಥಸಂಚಲನ ನಡೆಸಿದವು. ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪ್ರದೇಶಗಳಲ್ಲಿ ಮತದಾರರು ಶಾಂತಿಯುತ ಮತದಾನ ನಡೆಸಲು ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸ್ ಇಲಾಖೆ ನಗರದ ಪ್ರಮುಖ ರಸ್ತೆಗಳಲ್ಲಿ ಪಥಸಂಚಲನ ನಡೆಸಿದವು. ಪಥ ಸಂಚಲನದಲ್ಲಿ ಪೊಲೀಸ್ ಪಡೆ, ಅಶ್ವಾರೋಹಿ ಪಡೆ, ಅರೆಸೇನಾ ತುಕಡಿಗಳು ಭಾಗವಹಿಸಿ ಸಾರ್ವಜನಿಕರಲ್ಲಿ ನ್ಯಾಯ ಸಮ್ಮತ ಚುನಾವಣೆಯ ಕುರಿತು ಜಾಗೃತಿ ಮೂಡಿಸಿದವು. ಈ ವೇಳೆ ಸುದ್ದಿಗಾರರೊಂದಿಗೆ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಡಾ. ಕೆ. ವಿ. ರಾಜೇಂದ್ರ ಮಾತನಾಡಿ; ಚುನಾವಣಾ ಆಯೋಗದ ಸೂಚನೆಯ ಮೇರೆಗೆ ಸಮಾಜಘಾತುಕ ಶಕ್ತಿಗಳಿಗೆ ಎಚ್ಚರಿಕೆ ಹಾಗೂ ಮತದಾರರಲ್ಲಿ ಆತ್ಮವಿಶ್ವಾಸ ಮೂಡಿಸಲು ಪಥಸಂಚಲನ ನಡೆಸಲಾಗಿದೆ. ಮತದಾರರು ನಿರ್ಭೀತಿಯಿಂದ ತಮ್ಮ ಹಕ್ಕು ಚಲಾಯಿಸಬೇಕು ಎಂದು ತಿಳಿಸಿದರು. ಜಿಲ್ಲಾ ಪೊಲೀಸ್ ಆಯುಕ್ತ ರಮೇಶ್ ಬಾನೋತ್, ನಗರದ ಸೂಕ್ಷ್ಮ ಪ್ರದೇಶಗಳಲ್ಲಿ ಪಥಸಂಚನಲನ ನಡೆಸಲಾಗಿದ್ದು, ನಿರ್ಭೀತಿಯ ವಾತಾವರಣ ನಿರ್ಮಿಸಲು ಕ್ರಮ ವಹಿಸಲಾಗಿದೆ ಎಂದರು.

<><><>

ದಾವಣಗೆರೆ ಜಿಲ್ಲೆಯಲ್ಲಿ ಮುಕ್ತ ಮತ್ತು ನ್ಯಾಯ ಸಮ್ಮತ ಚುನಾವಣೆಗೆ 32 ಚೆಕ್ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ತಿಳಿಸಿದ್ದಾರೆ. ಪ್ರತಿ ಚೆಕ್ಪೋಸ್ಟ್‌ಗಳಲ್ಲಿ ಮೂರು ಜನ ಅಧಿಕಾರಿಗಳು ಮತ್ತು ಪೊಲೀಸ್ ಸಿಬ್ಬಂದಿಯೊಂದಿಗೆ ದಿನದ 24 ಗಂಟೆಯು ಕಾವಲು ನಡೆಸುವ ಮೂಲಕ ಅಕ್ರಮವಾಗಿ ಸಾಗಣೆ ಮಾಡುವ ವಸ್ತುಗಳು, ಮದ್ಯ, ನಗದು ಮತ್ತು ಇನ್ನಿತರೆ ಬೆಲೆ ಬಾಳುವ ವಸ್ತುಗಳ ಸಾಗಾಟದ ಮೇಲೆ ನಿಗಾ ಇಡಲಾಗಿದೆ ಎಂದು ಅವರು ಹೇಳಿದ್ದಾರೆ. ಈ ಮಧ್ಯೆ ದಾವಣಗೆರೆ ಉತ್ತರ ವಿಧಾನಸಭಾ ಕ್ಷೇತ್ರದ ಲೋಕಿಕೆರೆ ಚೆಕ್ ಪೋಸ್ಟ್ ಮೂಲಕ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 3. ಲಕ್ಷದ 89 ಸಾವಿರ ರೂಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎಂ.ವಿ.ವೆಂಕಟೇಶ್ ತಿಳಿಸಿದ್ದಾರೆ.

<><><>

ಲೋಕಸಭಾ ಸಾರ್ವತ್ರಿಕ ಚುನಾವಣೆ ಪ್ರಯುಕ್ತ ಜಿಲ್ಲೆಯಲ್ಲಿ 85 ವರ್ಷ ಮೀರಿದವರು, ವಿಕಲಾಂಗಚೇತನರು ಮತ್ತು ಕೋವಿಡ್ ಪೀಡಿತರಿಗೆ ವಿತರಿಸಲಾಗುವ ಅಂಚೆ ಮತ ಪತ್ರ ವಿತರಣಾ ಕಾರ್ಯವನ್ನು ಅತ್ಯಂತ ವ್ಯವಸ್ಥಿತವಾಗಿ ಯಾವುದೇ ಗೊಂದಲಗಳಿಗೆ ಆಸ್ಪದ ನೀಡದಂತೆ ಕೈಗೊಳ್ಳುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಕಾರವಾರದಲ್ಲಿ ನಿನ್ನೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು; ಮತಪತ್ರ ವಿತರಣೆ ನೀಡುವ ಕುರಿತು ಮನೆ ಮನೆಗಳಿಗೆ ಭೇಟಿ ನೀಡುವ ಕುರಿತಂತೆ ಸಾಕಷ್ಟು ಮುಂಚಿತವಾಗಿ ಪ್ರಚಾರ ಮಾಡುವಂತೆ ತಿಳಿಸಿದ ಜಿಲ್ಲಾಧಿಕಾರಿಗಳು, ಪ್ರತಿಯೊಬ್ಬರ ಅರ್ಹರ ಮನೆಗಳಿಗೂ ಭೇಟಿ ನೀಡಿ ಫಾರಂ ವಿತರಿಸಿ, ಒಪ್ಪಿಗೆ ಪತ್ರ ಪಡೆಯುವಂತೆ ತಿಳಿಸಿದರು. ಚುನಾವಣಾ ಆಯೋಗದ ಸೂಚನೆಯಂತೆ ನಿಗದಿತ ದಿನಾಂಕದೊಳಗೆ ಅಂಚೆ ಮತಪತ್ರ ವಿತರಣೆ ಮತ್ತು ಒಪ್ಪಿಗೆ ಪತ್ರಗಳನ್ನು ಸಂಗ್ರಹಿಸುವಂತೆ ತಿಳಿಸಿದ ಜಿಲ್ಲಾಧಿಕಾರಿಗಳು, ಯಾವುದೇ ಅರ್ಹ ಮತದಾರರು ಈ ಸೌಲಭ್ಯದಿಂದ ವಂಚಿತರಾಗದ0ತೆ ಎಚ್ಚರವಹಿಸುವಂತೆ ಸೂಚನೆ ನೀಡಿದರು.

<><><>

ಪೂರ್ವ ತಯಾರಿ ಹಾಗೂ ವಿದ್ಯಾರ್ಥಿಗಳಿಗೆ ಮುನ್ಸೂಚನೆ ಇಲ್ಲದೇ ರಾಜ್ಯ ಸರ್ಕಾರ 5, 8, 9 ಹಾಗೂ 11ನೇ ತರಗತಿಯ ಪರೀಕ್ಷೆಗಳನ್ನು ಪರೀಕ್ಷೆಯನ್ನು ಮುಂದೂಡುತ್ತಿರುವುದರಿಂದ ವಿದ್ಯಾರ್ಥಿಗಳು ಹಾಗೂ ಪೋಷಕರಲ್ಲಿ ಆತಂಕ ಮನೆ ಮಾಡಿದೆ. ಕೂಡಲೇ ಸರ್ಕಾರ ತನ್ನ ನಿಲುವನ್ನು ಸ್ಪಷ್ಟಪಡಿಸಬೇಕು ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ ಒತ್ತಾಯಿಸಿದ್ದಾರೆ. ಸರ್ಕಾರದ ಈ ನಿರ್ಧಾರದಿಂದ ವಿದ್ಯಾರ್ಥಿಗಳು ಅತಂತ್ರವಾಗಿದ್ದು, ಪರೀಕ್ಷೆಯ ದಿನಾಂಕ ಪದೇ ಪದೇ ಬದಲಾಗುತ್ತಿದೆ. ಶಿಕ್ಷಣ ಸಚಿವರು ಮಕ್ಕಳ ಮನಸ್ಥಿತಿಯನ್ನು ಅರಿತು ಸಮಸ್ಯೆಗೆ ಪರಿಹಾರ ಸೂಚಿಸಬೇಕು. ಇದನ್ನು ಮರೆತು ಚುನಾವಣೆಯಲ್ಲಿ ಮಗ್ನರಾಗಿದ್ದಾರೆ ಎಂದು ಆರೋಪಿಸಿದರು.

<><><>

ಗದಗ ಜಿಲ್ಲೆಯಲ್ಲಿ ಇದೇ 25 ರಿಂದ ಎಪ್ರಿಲ್ 6 ರವರೆಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ಜರುಗುತ್ತಿದ್ದು, ಪರೀಕ್ಷೆಗಳನ್ನು ವ್ಯವಸ್ಥಿತವಾಗಿ ಜರುಗಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ. ಎಸ್ಎಸ್ಎಲ್ಸಿ ಪರೀಕ್ಷೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಎಸ್.ಎಸ್.ಎಲ್.ಸಿ. ಪರೀಕ್ಷೆಗಳನ್ನು ಪಾರದರ್ಶಕವಾಗಿ ನಡೆಸಬೇಕು. ಪರೀಕ್ಷೆಗಳಲ್ಲಿ ಯಾವುದೇ ಅಕ್ರಮಗಳು ನಡೆಯದಂತೆ ಹಾಗೂ ಲೋಪದೋಷಗಳಾಗದಂತೆ ಕ್ರಮ ವಹಿಸಬೇಕು. ಸಮಯ ಪರಿಪಾಲನೆಯು ಅತ್ಯವಶ್ಯವಾಗಿದ್ದು, ಪರೀಕ್ಷಾರ್ಥಿಗಳಿಗೆ ಸೂಕ್ತ ಆಸನದ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಪರಿಣಾಮಕಾರಿ ವಿಚಕ್ಷಣ ಜಾಗೃತ ದಳಗಳನ್ನು ನೇಮಿಸಿ ಪರೀಕ್ಷಾ ಕಾರ್ಯ ಯಶಸ್ವಿಯಾಗಿ ನಡೆಯುವಂತೆ ಹಾಗೂ ಅವ್ಯವಹಾರಗಳು ನಡೆಯದಂತೆ ಕ್ರಮ ವಹಿಸಬೇಕೆಂದರು. ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತಲೂ ನಿಷೇಧಾಜ್ಞೆ ಜಾರಿ ಗೊಳಿಸಲಾಗುವುದು. ಒಟ್ಟಾರೆಯಾಗಿ ಪರೀಕ್ಷೆಗಳು ಯಶಸ್ವಿಯಾಗಿ ಜರುಗುವಂತೆ ಕ್ರಮ ವಹಿಸಬೇಕೆಂದು ಅವರು ಸೂಚಿಸಿದರು.